## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 520(717)

ಮಾನ್ಯ ಸದಸ್ಯರ ಹೆಸರು : ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 14.12.2020

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಅನುದಾನರಹಿತ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕರ ಹಾಗೂ ಶಿಕ್ಷಕೇತರ ಸಿಬ್ಬಂಧಿಯವರು ವೇತನವಿಲ್ಲದೇ ಶಾಲೆಗಳು ಪ್ರಾರಂಭವಾಗದೇ ಕೆಲಸವೂ ಇಲ್ಲದೆ ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br>ಖಾಸಗಿ ಶಾಲೆಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಪೋಷಕರು ಮೊದಲನೇ ಕಂತಿನ ಶುಲ್ಕ ಪಾವತಿಸುವಂತೆ ಸುತ್ತೋಲೆ ಸಂಖ್ಯೆ: ಸಿ7(2)ಪ್ರಾ.ಶಿ.ಅಶುಲ್ಕ.30/2020-21, ದಿನಾಂಕ:05.09.2020ರಲ್ಲಿ ಆದೇಶಿಸಿದೆ. ಸ್ವೀಕೃತ ಶುಲ್ಕದಿಂದ ಪ್ರಥಮವೆಚ್ಚವಾಗಿ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ನೌಕರರಿಗೆ ವೇತನ ಪಾವತಿಸುವಂತೆ ಸೂಚಿಸಲಾಗಿದೆ.<br>ವಾರ್ಷಿಕ ಶುಲ್ಕದ ಶೇ.70 ಶುಲ್ಕವನ್ನು ಪಡೆಯಲು ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುಮತಿ ನೀಡಿರುವುದರಿಂದ ಸಮಸ್ಯೆ ಪರಿಹಾರವಾಗುವ ಸಾಧ್ಯತೆಯಿದೆ. |
| ಆ | ಕೊರೋನಾ ವೈರಾಣು ತಡೆಗಟ್ಟುವ ಹಿನ್ನಲೆಯಲ್ಲಿ ಲಾಕ್‌ಡೌನ್ ಅವಧಿಯಲ್ಲಿ ಕಾರ್ಮಿಕರಿಗೆ, ಸಣ್ಣ ವ್ಯಾಪಾರಸ್ಥರು, ಟ್ಯಾಕ್ಸಿ ಹಾಗೂ ಆಟೋ ಚಾಲಕರಿಗೆ ವಿಶೇಷ ಪ್ಯಾಕೇಜ್ ಮೂಲಕ ಧನ ಸಹಾಯ ಮಾಡಿದಂತೆ ಅನುದಾನರಹಿತ ಶಿಕ್ಷಣ ಸಂಸ್ಥೆಗಳ ನೌಕರರಿಗೂ ವಿಶೇಷ ಪ್ಯಾಕೇಜ್ ನೀಡದಿರಲು ಕಾರಣವೇನು; | ಅನುದಾನರಹಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅನುದಾನರಹಿತ ಶಿಕ್ಷಕರ ವೇತನ ಮತ್ತು ಇತರೆ ಸೇವಾ ಸೌಲಭ್ಯಗಳನ್ನು ಆಯಾ ಆಡಳಿತ ಮಂಡಳಿಗಳೆ ಭರಿಸಬೇಕಾಗುವುದರಿಂದ ವಿಶೇಷ ಪ್ಯಾಕೇಜ್ ಮಂಜೂರಾತಿ ಪ್ರಶ್ನೆ ಉದ್ಭವಿಸುವುದಿಲ್ಲ. ಇದಕ್ಕೆ ಅನುಕೂಲ ಮಾಡುವ ದೃಷ್ಟಿಯಿಂದ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಮಾಡಿಕೊಳ್ಳಲು ಹಾಗೂ ಮೊದಲ ಅವಧಿಯ ಶುಲ್ಕಗಳನ್ನು ಸಂಗ್ರಹಿಸಲು ಸೆಪ್ಟೆಂಬರ್ ನಲ್ಲಿ ಅವಕಾಶ ಕಲ್ಪಿಸಿಕೊಡಲಾಗಿದೆ. ದಿನಾಂಕ:29.01.2021ರ ಸರ್ಕಾರಿ ಆದೇಶದಲ್ಲಿ ವಾರ್ಷಿಕ ಶುಲ್ಕದ ಶೇ.70 ರಷ್ಟು ಶುಲ್ಕವನ್ನು ಪಡೆಯಲು ಅನುದಾನರಹಿತ ಶಿಕ್ಷಣ ಸಂಸ್ಥೆಗಳಿಗೆ ಅನುಮತಿ ನೀಡಲಾಗಿದೆ. |
| ಇ | ಈಗಲಾದರೂ ಸರ್ಕಾರ ಅನುದಾನರಹಿತ ಶಾಲೆಗಳ ನೌಕರರ ಮನವಿಯನ್ನು ಪರಿಗಣಿಸಿ ವಿಶೇಷ ಪ್ಯಾಕೇಜ್ ಮಂಜೂರು ಮಾಡಲು ಕ್ರಮ ಕೈಗೊಳ್ಳುವುದೇ? | ಉಪ ಪ್ರಶ್ನೆ 'ಆ' ರಂತೆ ಉದ್ಭವಿಸುವುದಿಲ್ಲ. |

ಸಂ:ಇಪಿ 282 ಎಸ್‌ಇಎಸ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು